# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103


**ಸಂಖ್ಯೆ:ತುವಿ:ಸಿಬ್ಬಂದಿ-:2025-26/2601** | **ದಿನಾಂಕ:21.11.2025**

## ಕಚೇರಿ ಆದೇಶ

**ವಿಷಯ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಮಾಹಿತಿ ಒದಗಿಸಲು ನೋಡಲ್ ಅಧಿಕಾರಿಯನ್ನು ನೇಮಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 238 ವಿವಿಧ 2025 ದಿನಾಂಕ:07.11.2025
2. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:21.11.2025

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ-ಬೋಧಕೇತರ ವಿವಿಧ ಪ್ರವರ್ಗಗಳಿಗೆ ಸೇರಿರುವ ಅಧಿಕಾರಿ/ನೌಕರರು ಮತ್ತು ಶಿಕ್ಷಣದಲ್ಲಿ ಮೀಸಲಾತಿ ಪಡೆದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ **kscbc.karnataka.gov.in** ಗೆ ಕಳುಹಿಸುವ ಸಂಬಂಧ ಅಗತ್ಯ ಕ್ರಮವಹಿಸಲು **ಡಾ. ಶಿವಣ್ಣ ಎಸ್., ಸಹ ಪ್ರಾಧ್ಯಾಪಕರು, ಕನ್ನಡ ವಿಭಾಗ, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.** ಇವರನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಬೋಧನಾ ಕಾರ್ಯಭಾರದೊಂದಿಗೆ ಹೆಚ್ಚುವರಿಯಾಗಿ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

**ಅಡಕ:** ಸರ್ಕಾರದ ಪತ್ರದ ಪ್ರತಿ ಲಗತ್ತಿಸಿದೆ.

ಕುಲಸಚಿವರು

**ಕುಲಸಚಿವರು**
**ತುಮಕೂರು ವಿಶ್ವವಿದ್ಯಾನಿಲಯ**

ಗೆ,

**ಡಾ. ಶಿವಣ್ಣ ಎಸ್., ಸಹ ಪ್ರಾಧ್ಯಾಪಕರು, ಕನ್ನಡ ವಿಭಾಗ, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಅಧ್ಯಕ್ಷರು/ಸಂಯೋಜಕರು, ಸ್ನಾತಕೋತ್ತರ ವಿಭಾಗಗಳು, ಜ್ಞಾನಸಿರಿ ಕ್ಯಾಂಪಸ್, ಬಿದರಕಟ್ಟೆ ಹಾಗೂ ಸಿರಾ & ತಿಪಟೂರು ಸ್ನಾತಕೋತ್ತರ ಕೇಂದ್ರಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಾರ್ಯಪಾಲಕ ಅಭಿಯಂತರರು(ಪ್ರ), ಇಂಜಿನಿಯರಿಂಗ್ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
7. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
8. ನಿರ್ದೇಶಕರು, ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
9. ದೈಹಿಕ ಶಿಕ್ಷಣ ನಿರ್ದೇಶಕರು(ಪ್ರ), ಕ್ರೀಡಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
11. ಗ್ರಂಥಪಾಲಕರು, ವಿ.ವಿ. ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
12. ಎಲ್ಲಾ ನಿಲಯಪಾಲಕರು, ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ನಿಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
13. ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
14. ನಿರ್ದೇಶಕರು, ಐ.ಕ್ಯೂ.ಎ.ಸಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
15. ಸಂಯೋಜನಾಧಿಕಾರಿಗಳು, ಎನ್.ಎಸ್.ಎಸ್. ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
16. ಉಪಕುಲಸಚಿವರು, ಶೈಕ್ಷಣಿಕ/ಸಿಂಡಿಕೇಟ್/ಸಾಮಾನ್ಯ & ಖರೀದಿ / ಕಾನೂನು/ ಅಭಿವೃದ್ಧಿ ವಿಭಾಗ ಮತ್ತು ಪರೀಕ್ಷಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
17. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
18. ಕಚೇರಿ ಪ್ರತಿ

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 238 ವಿವಿಧ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 06ನೇ ಮಹಡಿ,
ಬೆಂಗಳೂರು, ದಿನಾಂಕ: 06.11.2025

**ಇವರಿಂದ,**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು-560 001.

**ಇವರಿಗೆ,**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560001.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
4. ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ-580003.
5. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಆಯುಕ್ತರ ಕಚೇರಿ, ಅರಮನೆ ರಸ್ತೆ, ಬೆಂಗಳೂರು.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಆಯುಕ್ತರ ಕಚೇರಿ, ಅರಮನೆ ರಸ್ತೆ, ಬೆಂಗಳೂರು.
7. ಆಡಳಿತಾಧಿಕಾರಿ, ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯಕೋಶ),ನಂ:8, ಕನ್ನಿಂಗ್ ಹ್ಯಾಂ ರಸ್ತೆ,ಬೆಂಗಳೂರು.
8. ಕರ್ನಾಟಕ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಸಚಿವರು/ಕುಲಪತಿಗಳು.

ಮಾನ್ಯರೇ,

**ವಿಷಯ:** ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ವಿವಿಧ ಇಲಾಖೆ/ಮಂಡಳಿ/ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಪ್ರವರ್ಗಗಳಿಗೆ ಸೇರಿದ ಅಧಿಕಾರಿ/ ನೌಕರರ ಮಾಹಿತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿ ಪಡೆದ ವಿದ್ಯಾರ್ಥಿಗಳ ವಿವರವನ್ನು ಒದಗಿಸಲು ನೋಡಲ್ ಅಧಿಕಾರಿಯನ್ನು ನೇಮಿಸುವ ಬಗ್ಗೆ.

**ಉಲ್ಲೇಖ:** ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಇವರ ಪತ್ರ ಸಂಖ್ಯೆ: ಕರಾಹಿಂವಆ/ಸಾ.ಶೈ.ಸ/2025-26, ದಿನಾಂಕ: 18.10.2025.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಸರ್ಕಾರದ ವಿವಿಧ ಇಲಾಖೆ/ ನಿಗಮ/ ಮಂಡಳಿ/ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ವಿಶ್ವ ವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ-ಬೋಧಕೇತರ ವಿವಿಧ ಪ್ರವರ್ಗಗಳಿಗೆ ಸೇರಿರುವ ಅಧಿಕಾರಿ/ನೌಕರರು ಮತ್ತು ಶಿಕ್ಷಣದಲ್ಲಿ ಮೀಸಲಾತಿ ಪಡೆದಿರುವ ವಿದ್ಯಾರ್ಥಿಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲು ತಂತ್ರಾಂಶವನ್ನು ಅಭಿವೃದ್ಧಿ ಪಡಿಸಿದ್ದು, ಸದರಿ ಮಾಹಿತಿಯನ್ನು ಆಯೋಗದ Web Portal ನಲ್ಲಿ Upload ಮಾಡಲು ಪ್ರತಿ ಇಲಾಖೆಯ ಸಚಿವಾಲಯದಿಂದ ನೋಡಲ್ ಅಧಿಕಾರಿಯನ್ನು ನೇಮಿಸುವಂತೆ ಕೋರಿದ್ದ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯ ಅಧೀನದ ಕ್ಷೇತ್ರ ಇಲಾಖೆ, ಸಂಸ್ಥೆ, ಸಾರ್ವಜನಿಕ ವಿಶ್ವವಿದ್ಯಾಲಯಗಳು ಆಯೋಗಕ್ಕೆ ಅವಶ್ಯವಿರುವ ಮಾಹಿತಿಯನ್ನು ಸಲ್ಲಿಸಲು ಮೇಲುಸ್ತುವಾರಿಗಾಗಿ 'ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಮತ್ತು ಸಾಮಾನ್ಯ) ಇವರನ್ನು ನೋಡಲ್ ಅಧಿಕಾರಿಯಾಗಿ ನೇಮಿಸಲಾಗಿರುತ್ತದೆ (ಉಲ್ಲೇಖಿತ ಪತ್ರವನ್ನು ಇದರೊಂದಿಗೆ ಉಗತ್ತಿಸಿದೆ).

..2.

ಮುಂದುವರೆದು, ತಮ್ಮ ವ್ಯಾಪ್ತಿಗೊಳಪಡುವ ಇಲಾಖೆ/ಮಂಡಳಿ/ಸಂಸ್ಥೆ/ಸಾರ್ವ ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಹಾಗೂ ಬೋಧಕೇತರ ವಿವಿಧ ಪ್ರವರ್ಗಗಳಿಗೆ ಸೇರಿದ ಗ್ರೂಪ್-ಎ, ಬಿ, ಸಿ ವೃಂದವಾರು ಮಾಹಿತಿಯನ್ನು ಹಾಗೂ ಮೀಸಲಾತಿ ಪಡೆದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಕರ್ನಾ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ kscbc.karnataka.gov.in ನಲ್ಲಿ ಅಪಲೋಡ್ ಮಾಡುವ ಸಲು ತಮ್ಮ ಇಲಾಖೆ/ಮಂಡಳಿ/ಸಂಸ್ಥೆ/ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿನ ಒರ್ವ ಸೂಕ್ತ ಅಧಿಕಾರಿಯ 'ಇಲಾಖಾ ನೋಡಲ್ ಅಧಿಕಾರಿ'ಯಾಗಿ ನೇಮಿಸಿ, ನೋಡಲ್ ಅಧಿಕಾರಿಯನ್ನು ನೇಮಿಸಿರುವ ಮಾಹಿತಿಯ ಆಯೋಗಕ್ಕೆ ಮತ್ತು ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಮತ್ತು ಸಾಮ ಇವರಿಗೆ ಒದಗಿಸುವಂತೆ ಹಾಗೂ ನಂತರದಲ್ಲಿ ಆಯೋಗವು ಅಪೇಕ್ಷಿಸುವ ಮಾಹಿತಿಯನ್ನು ಆಯೋಗದ ಪೋರ್ಟಲಿನಲ್ಲಿ ಅಪ್ಲೋಡ್ ಮಾಡುವಂತೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

07.11.23

(ಸಂಜಯ್ ಬಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ಕಾಲೇಜು ಶಿಕ್ಷಣ & ಸಾಮಾನ್ಯ).

**ಪ್ರತಿ (ಮಾಹಿತಿಗಾಗಿ):**

1) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ.
2) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ ಮತ್ತು ಸಾಮಾನ್ಯ)
3) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16-ಡಿ. ದೇವರ ಅರಸು ಭವನ, 2ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052

ಕರ್ನಾಟಕ ಸರ್ಕಾರ
ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ
ನಂ.16-ಡಿ. ದೇವರಾಜ ಅರಸು ಭವನ, 2ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ,
ವಸಂತನಗರ, ಬೆಂಗಳೂರು-560052.
ದೂ:080 29578999 e-mail kscbcb@gmail.com

ಸಂ:ಕರಾಹಿಂವಆ/ಸಾ.ಶೈ.ಸ/2025-26 ದಿನಾಂಕ:18-10-2025

ಇವರಿಗೆ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೇ,

**ವಿಷಯ:-** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಳ್ಳಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ ಸರ್ಕಾರದ ವಿವಿಧ ಇಲಾಖೆ/ ನಿಗಮ/ ಮಂಡಳಿ/ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಪ್ರವರ್ಗಗಳಿಗೆ ಸೇರಿದ ಅಧಿಕಾರಿ/ ನೌಕರರ ಮಾಹಿತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿ ಪಡೆದ ವಿದ್ಯಾರ್ಥಿಗಳ ವಿವರವನ್ನು ಒದಗಿಸಲು ಇಲಾಖಾ ಮುಖ್ಯಸ್ಥರಿಗೆ ನಿರ್ದೇಶನ ನೀಡುವ ಕುರಿತು.

**ಉಲ್ಲೇಖ:-** ಸರ್ಕಾರದ ಆದೇಶ ಸಂಖ್ಯೆ:ಹಿಂವಕ 289 ಬಿಸಿಎ 2025 ಬೆಂಗಳೂರು ದಿನಾಂಕ:13.08.2025.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ಎಲ್ಲಾ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲು ತಿಳಿಸಿದ್ದು, ಅದರಂತೆ ದಿನಾಂಕ:22.09.2025 ರಿಂದ ಸಮೀಕ್ಷಾ ಕಾರ್ಯವನ್ನು ಪ್ರಾರಂಭಿಸಲಾಗಿದೆ. ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ವಿವಿಧ ಪ್ರವರ್ಗಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು Empirical Data ಪಡೆದು ಸೂಕ್ತ ಶಿಫಾರಸ್ಸುಗಳೊಂದಿಗೆ ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಬೇಕಾಗಿರುತ್ತದೆ.

ಸರ್ಕಾರದ ವಿವಿಧ ಇಲಾಖೆ/ ನಿಗಮ/ ಮಂಡಳಿ/ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ವಿಶ್ವ ವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ-ಬೋಧಕೇತರ ವಿವಿಧ ಪ್ರವರ್ಗಗಳಿಗೆ ಸೇರಿರುವ ಅಧಿಕಾರಿ/ ನೌಕರರು ಮತ್ತು ಶಿಕ್ಷಣದಲ್ಲಿ ಮೀಸಲಾತಿ ಪಡೆದಿರುವ ವಿದ್ಯಾರ್ಥಿಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲು ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದೆ. ಲಿಂಕ್ ವಿವರ ಈ ಕೆಳಗಿನಂತಿದೆ.

https://www.scsptsp.karnataka.gov.in/BMS/KarnatakaStateCommissionForBackwardClasses/BCWDLogin.aspx

ಈ ಲಿಂಕ್ ಅನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವೆಬ್‌ಸೈಟ್ kscbc.karnataka.gov.in ರಲ್ಲಿ host ಮಾಡಲಾಗಿದೆ. ಈ ಮಾಹಿತಿಯನ್ನು ಸಂಗ್ರಹಿಸಿ web portal ನಲ್ಲಿ Update ಮಾಡಲು **ಪ್ರತಿ ಇಲಾಖೆಯ ಸಚಿವಾಲಯದಿಂದ ತಾಂತ್ರಿಕ ಜ್ಞಾನವುಳ್ಳ ನುರಿತ ನೋಡಲ್ ಅಧಿಕಾರಿಯನ್ನು ನೇಮಿಸಿ ಸದರಿಯವರ ಹೆಸರು, ಹುದ್ದೆಯ ಪದನಾಮ, ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಆಯೋಗದ ಇ-ಮೇಲ್ ವಿಳಾಸ kscbcb@gmail.com ಗೆ ಕಳುಹಿಸಲು ಕೋರಿದೆ.**

ಮುಂದುವರೆದು ಇಲಾಖಾವಾರು ನೇಮಕಗೊಂಡಿರುವ ನೋಡಲ್ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಇಲಾಖೆ/ನಿಗಮ/ಮಂಡಳಿ/ಸಂಸ್ಥೆಗಳಲ್ಲಿನ ವಿವಿಧ ಪ್ರವರ್ಗಗಳಿಗೆ ಸೇರಿದ ಅಧಿಕಾರಿ/ ಸಿಬ್ಬಂದಿಗಳಿಂದಲೇ ಸದರಿಯವರ ಪ್ರವರ್ಗ ಮತ್ತು ಜಾತಿಯ ಬಗ್ಗೆ ಮಾಹಿತಿ ಪಡೆದು ಕ್ರೋಢೀಕರಿಸಿ, ಇಲಾಖೆಯ ಒಟ್ಟಾರೆ ವೃಂದವಾರು ಸಂಖ್ಯೆಯನ್ನು ಮಾತ್ರ web portal ನಲ್ಲಿ ಜರೂರಾಗಿ update ಮಾಡಬೇಕಾಗಿರುತ್ತದೆ.

ಆದ್ದರಿಂದ ತಮ್ಮ ವ್ಯಾಪ್ತಿಗೊಳಪಡುವ ಇಲಾಖೆ/ ನಿಗಮ/ ಮಂಡಳಿ/ ಸಂಸ್ಥೆಗಳ/ವಿಶ್ವವಿದ್ಯಾಲಯಗಳ ಬೋಧಕ ಹಾಗೂ ಬೋಧಕೇತರ ವಿವಿಧ ಪ್ರವರ್ಗಗಳಿಗೆ ಸೇರಿದ ಗ್ರೂಪ್-ಎ, ಬಿ, ಸಿ & ಡಿ ವೃಂದವಾರು ಮಾಹಿತಿಯನ್ನು ಹಾಗೂ ವಿದ್ಯಾರ್ಥಿಗಳ ಮಾಹಿತಿಯನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ website- kscbc.karnataka.gov.in ನಲ್ಲಿ ಅಭಿವೃದ್ಧಿಗೊಳಿಸಿರುವ Web Portal ನಲ್ಲಿ ಒಟ್ಟಾರೆ ವೃಂದವಾರು ಸಂಖ್ಯೆಯನ್ನು ಇಲಾಖಾ ವತಿಯಿಂದ ನೇಮಕಗೊಂಡಿರುವ ನೋಡಲ್ ಅಧಿಕಾರಿಗಳು ನಮೂದಿಸಲು ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ

ಬೆಂಗಳೂರು.

ಪ್ರತಿಯನ್ನು :

1) ಮಾನ್ಯ ಅಧ್ಯಕ್ಷರು, ಹಿಂದುಳಿದ ವರ್ಗಗಳ ಆಯೋಗ ಇವರ ಅವಗಾಹನೆಗೆ.
2) ಕಛೇರಿ ಪ್ರತಿ.